**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 003**

ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಜೂನ್–2022/04/2022–23 ದಿನಾಂಕ:07.06.2022

**:: ಸುತ್ತೋಲೆ ::**

ವಿಷಯ:– 2021–22ನೇ ಸಾಲಿನ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳನ್ನು ನೋಂದಾಯಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:– 1. ಮಂಡಳಿ ಅಧಿಸೂಚನೆ ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಜೂನ್–2022/04/2022–23 ದಿನಾಂಕ:19.05.2022.

2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:30.05.2022.

* * * * * *

ಮಾರ್ಚ್/ಏಪ್ರಿಲ್–2022ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಬರೆದು ಅನುತ್ತೀರ್ಣರಾದ ಅಭ್ಯರ್ಥಿಗಳಿಗೆ ಹಾಗೂ ಈ ಹಿಂದಿನ ಸಾಲುಗಳಲ್ಲಿ ಅನುತ್ತೀರ್ಣರಾದ ಎಲ್ಲಾ ಅರ್ಹ ಪುನರಾವರ್ತಿತ ಅಭ್ಯರ್ಥಿಗಳಿಗೆ ಜೂನ್–2022 ರಲ್ಲಿ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಅಭ್ಯರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮುಖಾಂತರ ನೋಂದಾಯಿಸಲು, ಪರೀಕ್ಷಾ ಶುಲ್ಕ ಪಾವತಿ ಹಾಗೂ ಪ್ರಸ್ತಾವನೆ ಸಲ್ಲಿಕೆಗೆ ದಿನಾಂಕಗಳನ್ನು ಈಗಾಗಲೇ ವಿಸ್ತರಿಸಲಾಗಿರುತ್ತದೆ. ಆದಾಗ್ಯೂ ಪುನ: ದಿನಾಂಕವನ್ನು ವಿಸ್ತರಿಸುವಂತೆ ಕೆಲವು ಶಾಲೆಗಳಿಂದ/ ವಿದ್ಯಾರ್ಥಿಗಳಿಂದ/ಪೋಷಕರಿಂದ ದೂರವಾಣಿಯ ಮುಖಾಂತರ ಹಾಗೂ ಖುದ್ದಾಗಿ ಕೋರಿರುತ್ತಾರೆ. ಈ ಸಂಬಂಧ ಕೆಳಕಂಡಂತೆ ದಿನಾಂಕ ವಿಸ್ತರಿಸಿದೆ. ಇದು ಅಂತಿಮ ವಿಸ್ತರಣೆಯಾಗಿದ್ದು, ಇದೇ ರೀತಿ ದಿನಾಂಕಗಳನ್ನು ವಿಸ್ತರಿಸಿದಲ್ಲಿ ಮುಂದಿನ ಮಂಡಳಿಯ ಪರೀಕ್ಷಾ ಚಟುವಟಿಕೆಗಳಿಗೆ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ. ಆದ್ದರಿಂದ ಇದು ಅಂತಿಮ ವಿಸ್ತರಣೆಯಾಗಿರುತ್ತದೆ. ನಿಗಧಿಪಡಿಸಿರುವ ಅಂತಿಮ ದಿನಾಂಕದೊಳಗೆ ಎಲ್ಲಾ ವಿದ್ಯಾರ್ಥಿಗಳ ನೋಂದಣಿ ಬಗ್ಗೆ ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು ಕ್ರಮವಹಿಸುವುದು. ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಯ ನೋಂದಣಿಯಾಗದೆ ತೊಂದರೆಯಾದಲ್ಲಿ ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರೇ ವೈಯಕ್ತಿಕ ಹೊಣೆಗಾರರಾಗುತ್ತಾರೆ. ಮತ್ತೊಮ್ಮೆ ದಿನಾಂಕ ವಿಸ್ತರಣೆಗೆ ಅವಕಾಶವಿರುವುದಿಲ್ಲ.

| ಕ್ರ ಸಂ | ವಿವರ | ವಿಸ್ತರಣೆ ಮಾಡಿದ ಅಂತಿಮ ದಿನಾಂಕ |
|---|---|---|
| 1 | ಮಂಡಳಿ ಜಾಲತಾಣದ ಶಾಲಾಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ **ಅಂತಿಮ** ದಿನಾಂಕ: | 09.06.2022 |
| 2 | ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಈ ಹಿಂದಿನ ಸಾಲಿನಂತೆ ಭೌತಿಕವಾಗಿ ಮಂಡಳಿಯ ನೆಫ್ಟ್ ಚಲನ್ ಮೂಲಕ ಬ್ಯಾಂಕ್‌ಗೆ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: | 10.06.2022 |
| 3 | ದಿನಾಂಕ:08.06.2022 ಮತ್ತು 09.06.2022ರಂದು ನೋಂದಾಯಿಸಿದ ವಿದ್ಯಾರ್ಥಿಗಳ ಮಾಹಿತಿಯ ನಾಮಿನಲ್‌ರೋಲ್, ಎಂ.ಎಸ್.ಎ ಮತ್ತು ಬ್ಯಾಂಕ್ ಚಲನ್‌ನೊಂದಿಗೆ ಭೌತಿಕವಾಗಿ ಮಂಡಳಿಗೆ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: | 14.06.2022 |

2002-03 ರಿಂದ 2021-22ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆವರೆಗೆ ಅನುತ್ತೀರ್ಣರಾದ ಅರ್ಹ ಅಭ್ಯರ್ಥಿಗಳನ್ನು ಶಾಲಾ ಮುಖ್ಯೋಪಾಧ್ಯಾಯರು ಮಂಡಳಿಯ **https://sslc.karnataka.gov.in** ಜಾಲತಾಣದ ಶಾಲಾ ಲಾಗಿನ್ ಮೂಲಕ ನೋಂದಣಿ ಮಾಡುವುದು. 2003ಕ್ಕೂ ಹಿಂದಿನ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ನೋಂದಾಯಿಸಲು ಈ ಹಿಂದೆ ಇದ್ದಂತೆ MSA ಅರ್ಜಿಗಳನ್ನು ಭರ್ತಿ ಮಾಡಿ ಮಂಡಳಿಗೆ ಸಲ್ಲಿಸುವುದು. ದಿನಾಂಕ:08.06.2022 ಮತ್ತು 09.06.2022ರಂದು ನೋಂದಾಯಿಸಿದ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಆನ್‌ಲೈನ್ ಮುಖಾಂತರ ಜನರೇಟ್ ಆಗುವುದಿಲ್ಲ. ಈ ಸಂಬಂಧ ಮೇಲೆ ನಿಗಧಿಪಡಿಸಿರುವ ದಿನಾಂಕದೊಳಗೆ ಮಂಡಳಿ ನೆಫ್ಟ್ ಚಲನ್ ಮುಖಾಂತರ ಶುಲ್ಕವನ್ನು ಬ್ಯಾಂಕ್‌ನಲ್ಲಿ ಪಾವತಿಸುವುದು.

ಶುಲ್ಕ ಪಾವತಿಸಿದ ಬ್ಯಾಂಕ್ ನೆಫ್ಟ್ ಚಲನ್‌ನೊಂದಿಗೆ ಇತರೆ ದಾಖಲೆಗಳನ್ನು ಮಂಡಳಿಗೆ ಭೌತಿಕವಾಗಿ ಸಲ್ಲಿಸುವುದು. ನಿಗಧಿತ ಅವಧಿಯ ನಂತರ ಬರುವ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಮೇಲೆ ವಿವರಿಸಿರುವಂತೆ ದಿನಾಂಕ ವಿಸ್ತರಿಸಿರುವ ಮಾಹಿತಿಯನ್ನು ಸಂಬಂಧಪಟ್ಟ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಹಾಗೂ ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತಂದು ಪ್ರಚಾರ ಮಾಡುವುದರ ಮೂಲಕ ಸೂಕ್ತಕ್ರಮವಹಿಲು ಸೂಚಿಸಿದೆ.

7/6/2022

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು, ಪರೀಕ್ಷೆಗಳು

**ಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲಾ/ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಬಿ, ಸಿ ಮತ್ತು ಲೆಕ್ಕಪತ್ರಶಾಖೆಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
6. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.
7. ಕಛೇರಿ ಪ್ರತಿ.

**ಪ್ರತಿಯನ್ನು :-**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಪ್ರತಿಯನ್ನು ಗೌರವಗಳೊಂದಿಗೆ ಕಳುಹಿಸುತ್ತಾ ಸದರಿ ಮಾಹಿತಿಯನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರ ಆಪ್ತ ಕಾರ್ಯದರ್ಶಿಗಳಿಗೆ ಪ್ರತಿಯನ್ನು ಗೌರವಗಳೊಂದಿಗೆ ಕಳುಹಿಸುತ್ತಾ ಸದರಿ ಮಾಹಿತಿಯನ್ನು ಮಾನ್ಯ ಪ್ರಧಾನ ಕಾರ್ಯದರ್ಶಿಗಳ ಅವಗಾಹನೆಗೆ ತರಲು ಕೋರಿದೆ.
3. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರುರವರ ಆಪ್ತ ಕಾರ್ಯದರ್ಶಿಗಳಿಗೆ ಪ್ರತಿಯನ್ನು ಗೌರವಗಳೊಂದಿಗೆ ಕಳುಹಿಸುತ್ತಾ ಸದರಿ ಮಾಹಿತಿಯನ್ನು ಮಾನ್ಯ ಆಯುಕ್ತರ ಅವಗಾಹನೆಗೆ ತರಲು ಕೋರಿದೆ.